ಓ.ಎಸ್. ನಂ. 46/2024<br>ಪಿ.ಡಬ್ಲ್ಯೂ- 1

(ಇಂದು ದಿಃ 25-10-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು)

ಮುಂದುವರೆದ ಮುಖ್ಯ ವಿಚಾರಣೆ **:- ಶ್ರೀ.SKD** ವಕೀಲರಿಂದ **:-**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯಾಗಿ ಪ್ರತಿಜ್ಞಾ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನ್ನ ತಿಳುವಳಿಕೆಯ ಮೇರೆಗೆ ಬರೆಯಲ್ಪಟ್ಟಿರುತ್ತವೆ ಮತ್ತು ಅವು ಸತ್ಯವಾಗಿರುತ್ತವೆ. ಪ್ರತಿಜ್ಞಾ ಪತ್ರಕ್ಕೆ ಸಹಿ ಮಾಡಿರುತ್ತೇನೆ.

1. ದಿಃ 21-12-2023 ರ ಕ್ರಯದ ಕರಾರು ಪತ್ರದ ಮೂಲ ಪ್ರತಿಯನ್ನು ಮತ್ತು ಒಂದು ಹಣ ಸಂದ ರಶೀದಿಯ ಮೂಲ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ಮತ್ತು 2 ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-1 ರಲ್ಲಿರುವ ತನ್ನ ಮತ್ತು ಪ್ರತಿವಾದಿಯ ಸಹಿಗಳನ್ನು ನೋಡಿ ಗುರುತಿಸಿದ್ದು ಪ್ರತಿವಾದಿಯ ಸಹಿಯನ್ನು ನಿಪಿ-1(ಎ) ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಈಶ್ವರಮ್ಮ ಒಪ್ಪಿಗೆ ಸಾಕ್ಷಿದಾರರಾಗಿ ಸಹಿ ಮಾಡಿದ್ದಾರೆ. 3 ಜನ ಸಾಕ್ಷಿದಾರರಾಗಿ ಸಹಿ ಮಾಡಿದ್ದಾರೆ. ನಿಪಿ-1 ನ್ನು ಸಂಗಮೇಶ ಮರಗೋಳ ವಕೀಲರು ತಯ್ಯಾರಿಸಿದ್ದಾರೆ. ಸಾಕ್ಷಿ ನಿಪಿ-2 ರಲ್ಲಿರುವ ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2 ಕ್ಕೆ ಈಶ್ವರಮ್ಮ ಒಪ್ಪಿಗೆ ಸಾಕ್ಷಿದಾರರಾಗಿ ಸಹಿ ಮಾಡಿದ್ದು. 3 ಜನ ಸಾಕ್ಷಿದಾರರಾಗಿ ಸಹಿ ಮಾಡಿರುತ್ತಾರೆ.
2. ಲಾವಣಿ ಪತ್ರಿಕೆಯನ್ನು ನಿಪಿ-3 ಎಂದು,
3. 7 ಪಹಣಿಗಳನ್ನು ನಿಪಿ-4 ರಿಂದ 10 ಎಂದು,
4. ದಿಃ 08-02-2021 ರ ನೋಂದಾಯಿತಿ ವಿಭಾಗ ಪತ್ರದ ದೃಢೀಕೃತ ನಕಲನ್ನು ನಿಪಿ -11 ಎಂದು,
5. ದಿಃ 18-03-2024 ರಂದು ನಾನು ನನ್ನ ವಕೀಲರ ಮೂಲಕ ಪ್ರತಿವಾದಿಗೆ ನೀಡಿದ್ದ ಕಾನಾೂನತ್ಮಕ ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ-12 ಎಂದು, ಆ ಬಗ್ಗೆ ರಂಟೆ ರಶೀದಿಯನ್ನು ನಿಪಿ-13 ಎಂದು, ನಿಪಿ-12 ಕ್ಕೆ ಪ್ರತಿವಾದಿ ನೀಡಿದ್ದ ಪ್ರತ್ಯುತ್ತರ ನೋಟಿಸಿನ ಪ್ರತಿಯನ್ನು ನಿಪಿ-14 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಇಲ್ಲ**.**

**(**ಪ್ರತಿವಾದಿ ಪರ ವಕೀಲರ ವಿನಂತಿ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ. ಇದೆ.<br><br>ಹಿರಿಯ ಸಿವಿಲ್ ನ್ಯಾಯಾಧೀಶರು,<br>ಸೇಡಂ.